ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
ಡಿ.ವಿ.ಜಿ.

ನಿತ್ಯ ಪಂಚಾಂಗ

ಮಾಸ: ವೈಶಾಖ । ಸಂವತ್ಸರ: ಕ್ರೋಧಿ

05-06-2024 – ಬುಧವಾರ

ತಿಥಿ	: ಚತುರ್ದಶಿ
ಪಕ್ಷ	: ಕೃಷ್ಣ
ನಕ್ಷತ್ರ	: ಕೃತ್ತಿಕಾ
ಯೋಗ	: ಸುಕರ್ಮ
ಕರಣ	: ವಿಷ್ಟಿ
ಸೂರ್ಯೋದಯ	: 05:41:49
ಸೂರ್ಯಾಸ್ತ	: 19:09:23
ರಾಹು	: 12:26–14:07
ಯಮಘಂಡ	: 07:23–09:04
ಗುಳಿಕ	: 10:45–12:26

ತುಂಗಭದ್ರಾ ನೀರಿನ ಮಟ್ಟ

ಮಂಗಳವಾರ : 04-06-2024

ಗರಿಷ್ಠ ಮಟ್ಟ	1633 ಅಡಿ
ಇಂದಿನ ಮಟ್ಟ	1577.72 ಅಡಿ
ಒಳ ಹರಿವು	659 ಕ್ಯುಸೆಕ್
ಹೊರ ಹರಿವು	25 ಕ್ಯುಸೆಕ್
ಇಂದಿನ ಸಾಮರ್ಥ್ಯ	3.462 ಟಿಎಂಸಿ
ಗರಿಷ್ಠ ಸಾಮರ್ಥ್ಯ	105.788 ಟಿಎಂಸಿ

ಕಳೆದ ವರ್ಷ ಇದೇ ದಿನ

ಇಂದಿನ ಮಟ್ಟ	1580.94 ಅಡಿ
ಒಳ ಹರಿವು	1053 ಕ್ಯುಸೆಕ್
ಹೊರ ಹರಿವು	247 ಕ್ಯುಸೆಕ್
ಸಾಮರ್ಥ್ಯ	4.944 ಟಿಎಂಸಿ

ಅಯೋಧ್ಯೆಯಲ್ಲಿ ಗೆಲ್ಲದ ಬಿಜೆಪಿ ಯಾವ ಪಕ್ಷಕ್ಕೂ ಇಲ್ಲ ಬಹುಮತ

ಫಲಿತಾಂಶದ ಬಳಿಕ ಸಿಎಂ ಸಿದ್ದರಾಮಯ್ಯ ಸುದ್ದಿಗೋಷ್ಠಿಯಲ್ಲಿ ಹೇಳಿಕೆ

■ ಹಂಪಿ ಟೈಮ್ಸ್ ಬೆಂಗಳೂರು

ರಾಜ್ಯದಲ್ಲಿ ನಮ್ಮ ನಿರೀಕ್ಷೆಗೆ ತಕ್ಕಂತೆ ಸ್ಥಾನಗಳನ್ನು ಗೆಲ್ಲಲು ಸಾಧ್ಯವಾಗಿಲ್ಲ. 15-20 ಸ್ಥಾನ ನಮ್ಮ ನಿರೀಕ್ಷೆಯಾಗಿತ್ತು. ಆದರೆ, 2019 ರಲ್ಲಿ ಕೇವಲ ಒಂದು ಸ್ಥಾನದಲ್ಲಿ ಗೆದ್ದಿದ್ದೆವು. ಈಗ 9 ಕ್ಕೆ ಏರಿದ್ದೇವೆ. ಈ ಬಾರಿ ನಮಗೆ ಶೇ 45.34, ಬಿಜೆಪಿ ಶೇ 46.04 ರಷ್ಟು ಮತ ಪಡಿದಿದೆ ಎಂದು ಸಿ. ಎಂ.ಸಿದ್ದರಾಮಯ್ಯ ಹೇಳೀದರು.

ಚುನಾವಣಾ ಫಲಿತಾಂಶದ ಬಳಿಕ ಗೃಹ ಕಚೇರಿ ಕೃಷ್ಣಾದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. 2019 ರಲ್ಲಿ ಬಿಜೆಪಿ ಶೇ 51.38 ರಷ್ಟು ಮತ ಗಳಿಸಿತ್ತು. ನಮಗೆ ಶೇ31.88 ರಷ್ಟು ಮಾತ್ರ ಮತಗಳು ಬಂದಿದ್ದವು. 2019 ಕ್ಕೆ ಹೋಲಿಸಿದರೆ ನಮ್ಮ ಮತ ಪ್ರಮಾಣ ಹೆಚ್ಚಾಗಿದೆ. ಬಿಜೆಪಿ ಮತ ಪ್ರಮಾಣ ಶೇ5 ರಷ್ಟು ಕುಸಿದಿದೆ. ಜೆಡಿಎಸ್ ಜೊತೆ ಹೊಂದಾಣಿಕೆ ಬಳಿಕವೂ ಅವರ ಮತ ಪ್ರಮಾಣದಲ್ಲಿ ಇಳಿಕೆಯಾಗಿದೆ. ಜೆಡಿಎಸ್ ಕೂಡ 2019ಕ್ಕಿಂತ ಕಡಿಮೆ ಪ್ರಮಾಣದ ಮತ ಪಡೆದಿದೆ. ಆದರೂ ನಾವು ನಿರೀಕ್ಷಿತ ಪ್ರಮಾಣದಲ್ಲಿ ಸೀಟು ಗೆದ್ದಿಲ್ಲ. ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್ ಮತ ಪ್ರಮಾಣ ಹೆಚ್ಚಾಗಿದೆ. ಕೇಂದ್ರದಲ್ಲಿ ಅಧಿಕಾರಿದಲ್ಲಿದ್ದ ಬಿಜೆಪಿ ಮೋದಿ ಮುಖ 2014-2019 ಕ್ಕಿಂತ ಕಡಿಮೆ ಸೀಟು ಕಡಿಮೆ ಗಳಿಸಿದ್ದಾರೆ. ಮೋದಿ ಮುಖ ನೋಡಿಯೂ ಬಿಜೆಪಿಗೆ ಬಹುಮತ ಬಂದಿಲ್ಲ. ಯಾವ ಪಕ್ಷಕ್ಕೂ ಬಹುಮತ ಬಂದಿಲ್ಲ ಎಂದರು.

ಬಿಜೆಪಿ ಸರಳ ಬಹುಮತ ಪಡೆಯುವಲ್ಲೂ ಸೋತಿದೆ. ದೇಶದಲ್ಲಿ ಎಲ್ಲೂ ಮೋದಿಯವರ ಅಲೆ ಕಾಣಲಿಲ್ಲ. ಹೀಗಾಗಿ ಈ ಫಲಿತಾಂಶ ಮೋದಿ ಜನಪ್ರಿಯತೆ ನೆಲಕಚ್ಚಿದೆ ಎನ್ನುವುದು ಮೇಲು ನೋಟಕ್ಕೆ ಗೊತ್ತಾಗಿದೆ. ಸರ್ಕಾರ ಯಾರು ಮಾಡ್ತಾರೆ ಎಮ್ಮುವುದು ಈಗಲೇ ಹೇಳಲು ಸಾಧ್ಯವಿಲ್ಲ ಎಂದರು. ಮೋದಿಯವರು ಚುನಾವಣೆಯ ಕೊನೆ ಕೊನೆಗೆ ಧರ್ಮ, ದೇವರ ಹೆಸರಲ್ಲಿ ಮತ ಕೇಳಿ ನೇರವಾಗಿ ಇತರೆ ಧರ್ಮೀಯರ ವಿರುದ್ಧ ಭಾಷಣ ಮಾಡಿದರು, ಹಿಂದುಳಿದವರ ಮೀಸಲಾತಿ ಕಾಂಗ್ರೆಸ್ ಕಿತ್ತುಕೊಳ್ಳುತ್ತದೆ ಎಂದು ಸುಳ್ಳು ಹೇಳಿಕೊಂಡು ತಿರುಗಿದರೂ ಮೋದಿಯವರಿಗೆ ಬಹುಮತ ಬರಲಿಲ್ಲ. ಓಆಂ ಕಳೆದ ಬಾರಿಗಿಂತ 64 ಸ್ಥಾನ ಕಳೆದುಕೊಂಡಿದೆ. ಇದು ರಾಷ್ಟ್ರ ಮಟ್ಟದಲ್ಲಿ ಬಿಜೆಪಿಯ ಸೋಲು ಎಂದರು. ಈ ಸೋಲಿನ ಕಾರಣದಿಂದ ಮೋದಿಯವರಿಗೆ ಮತ್ತೆ ಪ್ರಧಾನಿ ಆಗುವ ನೈತಿಕ ಹಕ್ಕಿಲ್ಲ . ವಿರೋಧ ಪಕ್ಷದ ನಾಯಕರು, ಮುಖ್ಯಮಂತ್ರಿಗಳನ್ನು ಜೈಲಿಗೆ ಹಾಕಿದರು. ED, IT, CBI ಹೆಸರಲ್ಲಿ ಹೆದರಿಸಿದರು, ಬೆದರಿಸಿದರು ಆದರೂ ದೇಶದ ಜನ ಬಿಜೆಪಿಗೆ ಬಹುಮತ ಕೊಡಲಿಲ್ಲ.

ರಾಮನ ಹೆಸರಲ್ಲಿ, ರಾಮ ಮಂದಿರದ ಹೆಸರಲ್ಲಿ ಅಯೋಧ್ಯೆಯಲ್ಲೂ ಬಿಜೆಪಿ ಸೋತಿದೆ. ಇದು ಬಿಜೆಪಿಯ ಸೋಲು ಎಂದರು. ರಾಹುಲ್ ಗಾಂಧಿಯನ್ನು ದೇಶ ಒಪ್ಪಿಕೊಂಡಿದೆ. ರಾಹುಲ್ ಗಾಂಧಿಯವರ ಎರಡು ಯಾತ್ರೆಗಳು ಫಲ ನೀಡಿವೆ. ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿಯವರನ್ನು ದೇಶದ ಜನತೆ ಬಹಳ ದೊಡ್ಡ ಮಟ್ಟದಲ್ಲಿ ಒಪ್ಪಿಕೊಂಡಿದ್ದಾರೆ. ಎರಡೂ ಕ್ಷೇತ್ರಗಳಲ್ಲೂ ರಾಹುಲ್ ಗಾಂಧಿ ಭರ್ಜರಿ ಮತಗಳಿಂದ ಗೆದ್ದಿದ್ದಾರೆ. ಅವರಿಗೆ ಅಭಿನಂದಿಸುತ್ತೇನೆ ಎಂದರು.

ಕೈಯಲ್ಲಿ ಸಂವಿಧಾನ ಹಿಡಿದೇ ರಾಹುಲ್ ಗಾಂಧಿಯವರು ಇಡೀ ದೇಶದಲ್ಲಿ ಚುನಾವಣಾ ಪ್ರಚಾರ ಮಾಡಿದರು. ದೇಶದ ಜನ ಸಂವಿಧಾನದ ಉಳಿವಿಗೆ, ಪ್ರಜಾಪ್ರಭುತ್ವ ಉಳಿವಿಗಾಗಿ ರಾಹುಲ್ ಗಾಂಧಿಯವರ ಕೈ ಹಿಡಿದಿದ್ದಾರೆ ಎಂದರು.

ಸರ್ಕಾರದ ಗ್ಯಾರಂಟಿ ಯೋಜನೆಗಳ ಪರಿಣಾಮ ಏನಾಗಿದೆ ಎನ್ನುವ ಬಗ್ಗೆ ವಿಶ್ಲೇಷಣೆ ನಡೆಯಬೇಕಿದೆ. ಇಡೀ ದೇಶದಲ್ಲಿ ಕಾಂಗ್ರೆಸ್ ಮತ ಪ್ರಮಾಣ ಹೆಚ್ಚಾಗಿದೆ. ರಾಜ್ಯದಲ್ಲಿ ಬಿಜೆಪಿ ಹೆಚ್ಚು ಸ್ಥಾನ ಗೆದ್ದಿದ್ದರೂ ಬಿಜೆಪಿ ಮತ ಪ್ರಮಾಣ ಕುಸಿದಿದೆ. ಕಾಂಗ್ರೆಸ್ ಕಡಿಮೆ ಸೀಟು ಗೆದ್ದರೂ ಮತ ಪ್ರಮಾಣ ಹೆಚ್ಚಾಗಿದೆ ಎಂದು ಅಂಕಿ ಅಂಶಗಳ ಸಮೇತ ವಿವರಿಸಿದರು.

ಬಿಜೆಪಿ ಜನಪ್ರಿಯತೆ ಕುಸಿದಿದೆ ಇಡೀ ದೇಶದಲ್ಲಿ, ರಾಜ್ಯದಲ್ಲಿ 2019 ಕ್ಕಿಂತ ಬಿಜೆಪಿ ಪ್ರಭಾವ ವಿಪರೀತ ಕುಸಿದಿದೆ ಎಂದು ವಿವರಿಸಿದರು. ಕೇಂದ್ರದಲ್ಲಿ ಯಾರು ಸರ್ಕಾರ ರಚಿಸುತ್ತಾರೆ ಎನ್ನುವುದು ಅನಿಶ್ಚಿತವಾಗಿದೆ ಎಂದರು.

ವಿಜ್ಞಾನ

ಕುರುಡರಿಗೆ ಯಾಕೆ ಕನಸು ಬೀಳುವುದಿಲ್ಲ?

■ ಆರ್.ಬಿ.ಗುರುಬಸವರಾಜ

ಇದೊಂದು ತಪ್ಪು ತಿಳಿವಳಿಕೆಯ ಪ್ರಶ್ನೆ. 'ಕಣ್ಣಿಲ್ಲದವರಿಗೆ ಕನಸುಗಳಿಲ್ಲ' ಎಂದು ಯಾರು ಹೇಳಿದರೋ ತಿಳಿಯದು. ಆದರೆ ವಾಸ್ತವದಲ್ಲಿ ಕುರುಡರೂ ಸಹ ದೃಷ್ಟಿ ಹೊಂದಿದವರಂತೆ ಕನಸು ಕಾಣಬಲ್ಲರು. ಕನಸುಗಳು ನಿದ್ರೆಯ ಚಕ್ರದ ನೈಸರ್ಗಿಕ ಭಾಗವಾಗಿದ್ದು, ನಿದ್ರೆಯ ಕ್ಷಿಪ್ರ ಕಣ್ಣಿನ ಚಲನೆ (ಖಇಒ) ಹಂತದಲ್ಲಿ ಸಂಭವಿಸುತ್ತದೆ. ಕುರುಡರು ಈ ಹಂತದ ನಿದ್ರೆಯನ್ನು ಅನುಭವಿಸುತ್ತಾರೆ. ಅವರಿಗೂ ಇತರರಂತೆ ಈ ಹಂತದಲ್ಲಿ ಕನಸುಗಳು ಬೀಳುತ್ತವೆ.

ವಾಸ್ತವವಾಗಿ ಕುರುಡರು ಹೆಚ್ಚು ಚಲನಾತ್ಮಕವಾದ ಮತ್ತು ಸಂವೇದನಾಶೀಲ ಸಮೃದ್ಧ ಕನಸುಗಳನ್ನು ಹೊಂದಿರುತ್ತಾರೆ ಎಂದು ಅಧ್ಯಯನಗಳು ತೋರಿಸಿವೆ. ಏಕೆಂದರೆ ಅವರ ಮಿದುಳು ಸ್ಪರ್ಶ, ಧ್ವನಿ ಮತ್ತು ವಾಸನೆಯಂತಹ ಇತರ ಇಂದ್ರಿಯಗಳ ಮೇಲೆ ಹೆಚ್ಚು ಅವಲಂಬಿತವಾಗಿದೆ, ಅದು ಅವರ ಕನಸುಗಳಲ್ಲಿ ಸಂಯೋಜಿಸಲ್ಪಡುತ್ತದೆ.

ಹುಟ್ಟಿನಿಂದ ಕುರುಡರಾದವರ ಕನಸುಗಳು ಸ್ಪರ್ಶ, ಧ್ವನಿ, ರುಚಿ ಮತ್ತು ವಾಸನೆಯಂತಹ ಇತರ ಇಂದ್ರಿಯಗಳ ಮೇಲೆ ಆಧಾರಿತವಾಗಿರುತ್ತವೆ. ಅಪಘಾತ, ರೋಗಗಳು ಹಾಗೂ ಇನ್ನಿತರೇ ಕಾರಣಗಳಿಂದ ದೃಷ್ಟಿ ಕಳೆದುಕೊಂಡವರಿಗೆ ಅವರ ಕನಸುಗಳು ದೃಷ್ಟಿಗೋಚರ ಅಂಶಗಳನ್ನು ಒಳಗೊಂಡಿರುತ್ತವೆ. ಕುರುಡರಾಗುವ ಮೊದಲು ಅವರ ಸ್ಮರಣೆ ಮತ್ತು ಪ್ರಪಂಚದ ಅನುಭವಗಳನ್ನು ಆಧರಿಸಿ ಕನಸುಗಳು ಬೀಳುತ್ತವೆ.

ಎಲ್ಲಾ ಕುರುಡರು ಸಂಪೂರ್ಣವಾಗಿ ದೃಷ್ಟಿಹೀನರಾಗಿರುವುದಿಲ್ಲ. ಅವರ ನೆನಪುಗಳು ಮತ್ತು ಹಿಂದಿನ ಅನುಭವಗಳ ಆಧಾರದ ಮೇಲೆ ಅವರ ಕನಸಿನಲ್ಲಿ ದೃಶ್ಯ ಅನುಭವಗಳನ್ನು ಹೊಂದಿರುತ್ತಾರೆ. ಅವರ ಕನಸುಗಳ ವಿಷಯವು ಸಹ ವಿಭಿನ್ನವಾಗಿರುತ್ತದೆ. ಕುರುಡರು ದೃಷ್ಟಿ ಹೊಂದಿದವರಂತೆ ಹೆಚ್ಚು ಶ್ರೀಮಂತ ಮತ್ತು ಅರ್ಥಪೂರ್ಣ ಕನಸಿನ ಅನುಭವಗಳನ್ನು ಹೊಂದಿರುತ್ತಾರೆ.

ಸಾಮಾನ್ಯವಾಗಿ, ಕನಸುಗಳ ವಿಷಯವು ವ್ಯಕ್ತಿಯ ಭಾವನೆಗಳು, ನೆನಪುಗಳು ಮತ್ತು ಅನುಭವಗಳನ್ನು ಒಳಗೊಂಡಂತೆ ವ್ಯಾಪಕವಾದ ಅಂಶಗಳಿಂದ ಪ್ರಭಾವಿತವಾಗಿರುತ್ತದೆ. ಕುರುಡರಿಗೂ ಸಹ ಭಾವನೆಗಳು, ನೆನಪುಗಳು ಮತ್ತು ಅನುಭವಗಳಿರುವುದರಿಂದ ದೃಷ್ಟಿ ಹೊಂದಿರುವ ಜನರಂತೆಯೇ ಶ್ರೀಮಂತ ಮತ್ತು ವೈವಿಧ್ಯಮಯ ಕನಸುಗಳನ್ನು ಹೊಂದಬಹುದು.

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ವಿಜಯನಗರ ಜಿಲ್ಲೆಯ ಸಮಗ್ರ ಸುದ್ದಿ, ವಿಜ್ಞಾನ, ವಿಶೇಷ ಲೇಖನಗಳನ್ನು ಓದಲಿಚ್ಚಿಸುವವರು ಈ ಕೆಳಗಿನ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ, ವಾಟ್ಸಪ್ ಗ್ರೂಪಿಗೆ ಜಾಯಿನ್ ಆಗಿ ಹಂಪಿ ಟೈಮ್ಸ್ ಇ-ಪತ್ರಿಕೆ ಓದಿರಿ.
Only Admins can Send Messages to this Group
Join for to Get Daily E-paper

14 ಭಾಷೆ
ಈಗ ನಿಮ್ಮ ಮಾತೃ ಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
www.hampitimes.com

ಕಲ್ಯಾಣ ಕರ್ನಾಟಕದ ಕೈ ಅಭ್ಯರ್ಥಿಗಳಿಗೆ ಅಭೂತಪೂರ್ವ ಗೆಲುವು ಜನಪರ ಸರ್ಕಾರಕ್ಕೆ ಜನಬೆಂಬಲ ಎಂದ ಸಚಿವ ಜಮೀರ್ ಖಾನ್

■ ಹಂಪಿ ಟೈಮ್ಸ್ ಹೊಸಪೇಟೆ

ಲೋಕಸಭೆ ಚುನಾವಣೆಯಲ್ಲಿ ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ರಕ್ಷಣೆಗಾಗಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟ ನಡೆಸಿದ ಹೋರಾಟದಲ್ಲಿ ಬಳ್ಳಾರಿ ಹಾಗೂ ಕೊಪ್ಪಳ ಸೇರಿ ಹೈದರಾಬಾದ್ ಕರ್ನಾಟಕ ಭಾಗದ ಐದು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಅಭೂತ ಪೂರ್ವ ಗೆಲುವು ತಂದು ಕೊಟ್ಟ ಮತದಾರರಿಗೆ ಹೃತ್ಪೂರ್ವಕ ಕೃತಜ್ಞತೆಗಳು ಎಂದು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೋಮುವಾದಿ ಹಾಗೂ ಸಂವಿಧಾನ ವಿರೋಧಿ ಶಕ್ತಿ ಗಳನ್ನು ಹಿಮ್ಮೆಟ್ಟಿಸುವ ನಿಟ್ಟಿನಲ್ಲಿ ಬಳ್ಳಾರಿಯಲ್ಲಿ ತುಕಾರಾಮ್, ಕೊಪ್ಪಳದಲ್ಲಿ ರಾಜಶೇಖರ್ ಹಿಟ್ನಾಳ್, ರಾಯಚೂರಿನಲ್ಲಿ ಕುಮಾರ ನಾಯ್ಕ್, ಬೀದರ್ ನಲ್ಲಿ ಸಾಗರ್ ಖಂಡ್ರೆ, ಕಲಬುರಗಿ ಯಲ್ಲಿ ರಾಧಾಕೃಷ್ಣ ದೊಡ್ಡಮನಿ ಅವರದು ಅತಿ ದೊಡ್ಡ ಗೆಲುವು. ಗೆದ್ದ ಎಲ್ಲಾ ಅಭ್ಯರ್ಥಿಗಳಿಗೂ ಅಭಿನಂದನೆಗಳನ್ನ ತಿಳಿಸಿದರು.

ರಾಷ್ಟ್ರ ಮಟ್ಟದಲ್ಲಿ ಮಲ್ಲಿಕಾರ್ಜುನ ಖರ್ಗೆ ಸೋನಿಯಾ ಗಾಂಧಿ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ರಾಜ್ಯದ ಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿ . ಕೆ. ಶಿವಕುಮಾರ್ ಅವರ ನಾಯಕತ್ವದ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಪರ ಕಾರ್ಯಕ್ರಮಗಳಿಗೆ ದೊರೆತ ಜಯ ಇದಾಗಿದೆ. ನಾನು ಮತ್ತೊಮ್ಮೆ ಜನತೆಗೆ ಕೃತಜ್ಞತೆ ಸಲ್ಲಿಸುತ್ತೇನೆ. ಪಕ್ಷದ ಎಲ್ಲ ಶಾಸಕರು, ಮುಖಂಡರು, ಕಾರ್ಯಕರ್ತರಿಗೆ ಧನ್ಯವಾದ ಎಂದು ತಿಳಿಸಿದ್ದಾರೆ.

ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ಹಂಪಿ ಟೈಮ್ಸ್ ಹೊಸಪೇಟೆ

ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ 2024-25ನೇ ಸಾಲಿನ ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ರಾಷ್ಟ್ರಾದ್ಯಂತ ಅರ್ಜಿ ಆಹ್ವಾನಿಸಲಾಗಿದೆ.

ವಿಜಯನಗರ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ, ಸಂಸ್ಕೃತಿ ಮತ್ತು ನೂತನ ಆವಿಸ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ 5 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿನ ಸಾಧನೆ ಮಾಡಿರುವ ಎಲ್ಲಾ ಮಕ್ಕಳು ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿ 2025ಕ್ಕೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಜುಲೈ 31 ರೊಳಗೆ ಅರ್ಜಿಯನ್ನು ಆನ್‌ಲೈನ್(https://awards.gov.in) ಮೂಲಕ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಶ್ರೀಯುತ ಸುದೀಪ್ ಕುಮಾರ್ ಉಂಕಿಯವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸೋಲು ಗೆಲುವು ಸಹಜ

ಹಂಪಿ ಟೈಮ್ಸ್ ಕೊಪ್ಪಳ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸೋಲು ಗೆಲುವು ಸಹಜ. ಮತದಾರರ ತೀರ್ಪಿಗೆ ತಲೆ ಬಾಗುವೆ.

ಬಿಜೆಪಿಯ ಸಾಮಾನ್ಯ ಕಾರ್ಯಕರ್ತನಾಗಿ ಪಕ್ಷ ಸಂಘಟಿಸುವೆ ಎಂದು ಬಿಜೆಪಿ ಪರಾಜಿತ ಅಭ್ಯರ್ಥಿ ಡಾ.ಬಸವರಾಜ ಕೆ.ಶರಣಪ್ಪ ಹೇಳಿದರು. ಕೊಪ್ಪಳ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ನೀಡಿದ ಬಿಜೆಪಿ ಕೇಂದ್ರ, ರಾಜ್ಯ ನಾಯಕರಿಗೆ, ನನ್ನ ಪರ ಪ್ರಚಾರ ಮಾಡಿದ ಕಾರ್ಯಕರ್ತರು ಹಾಗೂ ಮತದಾರರಿಗೆ ಧನ್ಯವಾದಗಳು. ಮತದಾರರು ತೋರಿಸಿದ ಪ್ರೀತಿಗೆ ನಾನು ಚಿರ ಋಣಿಯಾಗಿದ್ದೇನೆ. ಕಾರ್ಯಕರ್ತರ ಜತೆ ನಿಂತು ಪಕ್ಷ ಸಂಘಟಿಸುವೆ.

ಚುನಾವಣೆ ವೇಳೆ ಕುಷ್ಟಗಿ, ಕೊಪ್ಪಳ, ಗಂಗಾವತಿ, ಯಲಬುರ್ಗಾ, ಕನಕಗಿರಿ, ಮಸ್ಕಿ, ಸಿಂಧನೂರು, ಸಿರುಗುಪ್ಪ ವಿಧಾನಸಭಾ ಕ್ಷೇತ್ರ ಬಿಜೆಪಿ ನಾಯಕರು, ಮುಖಂಡರು ಹಾಗೂ ಕಾರ್ಯಕರ್ತರು ಪ್ರಚಾರ ಮಾಡಿದ್ದಾರೆ. ಪ್ರಚಾರದ ವೇಳೆ ಮನೆಯ ಮಗನಂತೆ ಪ್ರೀತಿ ತೋರಿದ್ದಾರೆ. ಅವರಿಗೆ ನಾನು ಅಭಾರಿಯಾಗಿದ್ದೇನೆ. ಪರಾಜಿತಗೊಂಡರೂ, ಜನರ ಮಧ್ಯೆ ಇದ್ದು, ಸಮಸ್ಯೆಗಳಿಗೆ ಪರಿಹಾರ ಕೊಡಿಸಲು ಹೋರಾಡುವೆ ಎಂದರು.

ನಾಯಿ ಕಡಿದಲ್ಲಿ ನಿರ್ಲಕ್ಷ್ಯ ಮಾಡದೇ ರೇಬೀಸ್ ಚುಚ್ಚುಮದ್ದು ಪಡೆಯಿರಿ

■ ಹಂಪಿ ಟೈಮ್ಸ್ ಬಳ್ಳಾರಿ

ಸಾಕಿದ ಅಥವಾ ಬೀದಿ ನಾಯಿಗಳು ಕಡಿದ ಸಂದರ್ಭದಲ್ಲಿ ನಿರ್ಲಕ್ಷ್ಯ ತೋರದೆ, ಸೋಪು, ನೀರಿನಿಂದ ಗಾಯ ಅಥವಾ ಪರಚಿದ ಭಾಗವನ್ನು ತೊಳೆದು ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ರೇಬೀಸ್ ಚುಚ್ಚುಮದ್ದು ಪಡೆಯಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಹೇಳಿದರು.

ಅವರು ಸೋಮವಾರದಂದು, ಬಳ್ಳಾರಿಯ ಬಂಡಿಹಟ್ಟಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ವಟ್ಟಪ್ಪಕೇರಿ ಪ್ರದೇಶದಲ್ಲಿ ಕ್ಷೇತ್ರ ಭೇಟಿ ಮಾಡಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಮಾತನಾಡಿದರು.<ನಾಯಿ, ಬೆಕ್ಕು, ಇತರೆ ಯಾವುದೇ ಪ್ರಾಣಿಗಳು ಕಚ್ಚಿದಾಗ ರೇಬೀಸ್ ಕಾಯಿಲೆ ಬರುವ ಸಾಧ್ಯತೆಯಿದ್ದು, ಮುಖ್ಯವಾಗಿ ನಾಯಿಗಳ ಕಡಿತದಿಂದ ಹೆಚ್ಚಿನ ಪ್ರಮಾಣದಲ್ಲಿ ರೋಗ ಹರಡುವುದರಿಂದ ನಿರ್ಲಕ್ಷ್ಯ ಮಾಡದೇ, ಚುಚ್ಚುಮದ್ದು ಪಡೆದು, ಸಂಭಾವ್ಯ ರೇಬಿಸ್ ಖಾಯಿಲೆ ತಡೆಯುವುದರ ಮೂಲಕ ವ್ಯಕ್ತಿಯ ಜೀವ ಕಾಪಾಡುವ ಕಾರ್ಯ ಪ್ರತಿಯೊಬ್ಬರೂ ಮಾಡಬೇಕಿದೆ ಎಂದರು.

ಮನುಷ್ಯರಿಗೆ ರೇಬಿಸ್ ರೋಗವು ಶೇ.99ರಷ್ಟು ನಾಯಿ ಕಡಿತದಿಂದ ಬರುತ್ತದೆ, ಇನ್ನುಳಿದಂತೆ ಬೆಕ್ಕು ತೋಳ ನಾಯಿ ಕಾಡು ಪ್ರಾಣಿಗಳ ಕಡಿತದಿಂದ ಶೇ.1 ಪ್ರಮಾಣದಷ್ಟು ಹರಡುತ್ತದೆ. ರೇಬೀಸ್ ತಡೆಗೆ ನಾಯಿ ಕಚ್ಚಿದ ನಂತರ ಗಾಯವನ್ನು ಸ್ವಚ್ಚ ನೀರಿನಲ್ಲಿ 15 ನಿಮಿಷಗಳ ಕಾಲ ತೊಳೆಯುವುದರಿಂದ ಶೇ.50 ರಿಂದ 70 ರಷ್ಟು ರೇಬಿಸ್‌ಗೆ ತುತ್ತಾಗುವುದನ್ನು ತಡೆಯಬಹುದು. ವೈದ್ಯರ ಸಲಹೆ ಮೇರೆಗೆ 1ನೇ ದಿವಸ, 3ನೇ ದಿವಸ, 7ನೇ ದಿವಸ, 14ನೇ ದಿವಸ, 28ನೇ ದಿವಸ ಸಂಪೂರ್ಣವಾಗಿ (ಎಲ್ಲಾ 5 ಡೋಸ್‌ಗಳನ್ನು) ಪಡೆಯುವುದರ ಮೂಲಕ ರೇಬಿಸ್ ತಡೆಗಟ್ಟಬಹುದಾಗಿದೆ ಎಂದರು.